ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಶಾಖೆ / ವಿಷಯ : DEPARTMENT / SUBJECT: 3 ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE 30/3/2021

# 2 ವಾರ ಟಫ್ ರೂಲ್ಸ್

## ಲಾಕ್‌ಡೌನ್, ನೈಟ್‌ಕರ್ಫ್ಯೂ ಇಲ್ಲ । ಶಾಲಾ-ಕಾಲೇಜು ಬಂದ್ ಮಾಡಲ್ಲ
## ಚಿತ್ರಮಂದಿರಗಳಿಗೆ ನಿರ್ಬಂಧವಿಲ್ಲ । ಪ್ರತಿಭಟನೆಗಳಿಗೆ ಅವಕಾಶವಿಲ್ಲ

30/3/21

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಕರೋನಾ ಎರಡನೇ ಅಲೆ ವೇಗವಾಗಿ ಹಬ್ಬುತ್ತಿರುವಾಗಲೇ ತುರ್ತು ಸಭೆ ಕರೆದಿದ್ದ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು, ರಾಜ್ಯದಲ್ಲಿ ಲಾಕ್‌ಡೌನ್ ಇಲ್ಲ ಎನ್ನುವುದನ್ನು ಸ್ಪಷ್ಟಪಡಿಸಿದ್ದಾರೆ. ಅಲ್ಲದೇ, ಮುಂದಿನ ಎರಡು ವಾರಗಳ ಕಾಲ ಟಫ್ ರೂಲ್ಸ್ ಹೇರಲಾಗುವುದು ಎಂದು ಹೇಳಿದ್ದಾರೆ.

ಕರೋನಾ ಪ್ರಕರಣ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಿಎಂ ನೇತೃತ್ವದಲ್ಲಿ ಸೋಮವಾರ ಸಭೆ ನಡೆಸಲಾಯಿತು. ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಸದ್ಯಕ್ಕೆ ರಾಜ್ಯದಲ್ಲಿ ಲಾಕ್‌ಡೌನ್ ಹಾಗೂ ನೈಟ್‌ಕರ್ಫ್ಯೂ ಮಾಡಲ್ಲ, ಜಾತ್ರೆ, ಮದುವೆ ಸೇರಿದಂತೆ ಯಾವುದೇ ಕಾರ್ಯಕ್ರಮಗಳಿಗೆ ಹೆಚ್ಚಿನ ಜನ ಸೇರುವಂತಿಲ್ಲ. ಸಾರ್ವಜನಿಕ ಸ್ಥಳಗಳಲ್ಲಿ ಜನರು ಕಡ್ಡಾಯವಾಗಿ ಮಾಸ್ಕ್ ಬಳಸಲೇಬೇಕು. ಮಾಸ್ಕ್ ಹಾಕದಿದ್ದಲ್ಲಿ ದಂಡ ವಿಧಿಸಲಾಗುವುದು' ಎಂದು ಎಚ್ಚರಿಕೆ ಸಂದೇಶ ನೀಡಿದ್ದಾರೆ.

ಕರೋನಾ ವಿಷಯವಾಗಿ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಪತ್ರ ಬರೆದು ಸಲಹೆ ನೀಡಿದ್ದಾರೆ. ಈ ಸಭೆಯಲ್ಲಿ ಪ್ರತಿಪಕ್ಷ ನಾಯಕರ ಸಲಹೆಯನ್ನು ಎಲ್ಲರಿಗೂ ತಿಳಿಸಿದ್ದೇವೆ' ಎಂದರು.

**ಸಚಿವರ ಬೇಕಾಬಿಟ್ಟಿ ಹೇಳಿಕೆಗೆ ಸಿಎಂ ಬ್ರೇಕ್**: ಲಾಕ್‌ಡೌನ್, ನೈಟ್ ಕರ್ಫ್ಯೂ ಬಗ್ಗೆ ಯಾರೂ ಬೇಕಾಬಿಟ್ಟಿ ಹೇಳಿಕೆ ಕೊಡುವ ಹಾಗಿಲ್ಲ ಎಂದು ಸಚಿವರು ಮತ್ತು ಅಧಿಕಾರಿಗಳಿಗೆ ಸಿಎಂ ಖಡಕ್ ಸೂಚನೆ ನೀಡಿದ್ದಾರೆ.

ಲಾಕ್‌ಡೌನ್, ಕರ್ಫ್ಯೂ, ಕಂಟೇನ್ಮೆಂಟ್ ವಲಯಗಳ ಬಗ್ಗೆ ಆಯಾ ಕಾಲಕ್ಕೆ ತಕ್ಕಂತೆ ಕೇಂದ್ರ ಗೃಹ ಸಚಿವಾಲಯ ಮಾತ್ರ ಆದೇಶ ಹೊರಡಿಸಲಿದೆ. ಕರೋನಾ ನಿಯಮಾವಳಿ ಕುರಿತು ಕೇಂದ್ರದ ಮಾದರಿಯಲ್ಲೇ ರಾಜ್ಯ ವಿಪತ್ತು ನಿರ್ವಹಣಾ ಇಲಾಖೆ ಆದೇಶಗಳನ್ನು ಹೊರಡಿಸಲಿದೆ. ಆದರೆ ಇತ್ತೀಚೆಗೆ ಕೆಲವು ಆದೇಶಗಳನ್ನು ಇತರೆ ಇಲಾಖೆಗಳು ಹೊರಡಿಸಿರುವುದು ಗಮನಕ್ಕೆ ಬಂದ ಹಿನ್ನೆಲೆ ಕರೋನಾಗೆ ಸಂಬಂಧಿಸಿದ ಯಾವುದೇ ಸೂಚನೆಗಳನ್ನು ಮತ್ತು ನಿರ್ದೇಶನಗಳನ್ನು ರಾಜ್ಯ ವಿಪತ್ತು ನಿರ್ವಹಣಾ ಕಾರ್ಯ ಸಮಿತಿಯ ಮುಖ್ಯಸ್ಥರೇ ಹೊರಡಿಸಬೇಕು. ಅದು ಮುಖ್ಯಮಂತ್ರಿಗಳ ಅನುಮೋದನೆ ಪಡೆದ ಬಳಿಕವೇ ಮುಖ್ಯಕಾರ್ಯದರ್ಶಿಗಳು ಆದೇಶ ಹೊರಡಿಸತಕ್ಕದ್ದು. ಎಂದು ಸಿಎಂ ಕಚೇರಿಯಿಂದ ಆದೇಶ ಹೊರಬಿದ್ದಿದೆ.



ಕರೋನಾ ಪ್ರಕರಣ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಿಎಂ ನೇತೃತ್ವದಲ್ಲಿ ಸೋಮವಾರ ಸಭೆ ನಡೆಸಲಾಯಿತು.




### ಅನುದಾನದ ಕೊರತೆ ಇಲ್ಲ

'ಕರೋನಾ ನಿರ್ವಹಣೆಗೆ ಅನುದಾನದ ಕೊರತೆ ಇಲ್ಲ. ಈಗಾಗಲೇ 150 ಕೋಟಿ ರುಪಾಯಿ ಬಿಡುಗಡೆ ಮಾಡಿದ್ದೇವೆ. ಸಾರ್ವಜನಿಕರು ಮುನ್ನೆಚ್ಚರಿಕೆ ಕ್ರಮ ವಹಿಸಲೇಬೇಕು. ಫೆಬ್ರವರಿಯಲ್ಲಿ ಕರೋನಾ ಪ್ರಕರಣ ಶೇ.0.9 ಇತ್ತು. ಮಾರ್ಚ್‌ನಲ್ಲಿ ಶೇ.1.45 ರಷ್ಟು ಹೆಚ್ಚಾಗಿದೆ. ಕರೋನಾ ಚಿಕಿತ್ಸೆಗಾಗಿ ಬೆಂಗಳೂರಿನ ಹಜ್ ಭವನದಲ್ಲಿ 100 ಹಾಸಿಗೆ ಹಾಗೂ ಕೋರಮಂಗಲದ ಸ್ಟೇಡಿಯಂನಲ್ಲಿ 250 ಹಾಸಿಗೆ ವ್ಯವಸ್ಥೆ ಮಾಡಲಾಗಿದೆ. ಮಹಾರಾಷ್ಟ್ರದಲ್ಲಿ ಒಂದು ದಿನಕ್ಕೆ 40 ಸಾವಿರ ಕೇಸ್ ಬಂದರೆ ರಾಜ್ಯದಲ್ಲಿ 3 ಸಾವಿರ ಕೇಸ್ ಪತ್ತೆಯಾಗುತ್ತಿವೆ' ಎಂದು ಸಿಎಂ ತಿಳಿಸಿದರು.

**ಆರು ತಿಂಗಳು ಕಲ್ಯಾಣ ಮಂಟಪ ಬಂದ್**: ಕರೋನಾ ಮಾರ್ಗಸೂಚಿ ಪಾಲಿಸದಿದ್ದರೆ ಕಲ್ಯಾಣ ಮಂಟಪದ ಮಾಲೀಕರಿಗೆ ದಂಡ ಹಾಕಲಾಗುತ್ತದೆ. ಕರೋನಾ ಸೋಂಕು ಹೆಚ್ಚು ಕಂಡು ಬಂದರೆ 6 ತಿಂಗಳು ಮದುವೆ ಮಂಟಪಗಳನ್ನು ಬಂದ್ ಮಾಡಲಾಗುವುದು.

ಕೊಳಗೇರಿಗಳಲ್ಲಿ ಕರೋನಾ ಪ್ರಕರಣಗಳು ಕಡಿಮೆ ಇವೆ. ಅಪಾರ್ಟ್‌ಮೆಂಟ್‌ಗಳಲ್ಲಿ ಕರೋನಾ ನಿರ್ವಹಣೆ ಅಗತ್ಯ. ಕರೋನಾ ಹೆಚ್ಚಾಗುತ್ತಿರುವ ಅಪಾರ್ಟ್‌ಮೆಂಟ್‌ಗಳಲ್ಲಿ ಮೋಜು-ಮಸ್ತಿ ಮಾಡಲು ಅವಕಾಶ ಇಲ್ಲ.

ಉಪ ಚುನಾವಣೆಗಳ ರ್‍ಯಾಲಿಯಲ್ಲಿ ಜನ ಸೇರುವುದರ ಬಗ್ಗೆ ಕಠಿಣ ಕ್ರಮ ತೆಗೆದುಕೊಳ್ಳಲಾಗುತ್ತದೆ. ಚುನಾವಣೆ ರ್‍ಯಾಲಿ, ಸೇರಿದಂತೆ ಎಲ್ಲ ಕಡೆ ಜನ ಸೇರಿಸಿದರೆ ಅಂಥಹವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು.

ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿ

- ಜಾತ್ರೆ, ಉತ್ಸವ, ರ್‍ಯಾಲಿ, ಪ್ರತಿಭಟನೆಗಳಿಗೆ 2 ವಾರ ತಡೆ
- ಮಾಸ್ಕ್ ಧರಿಸದಿದ್ದರೆ ಶಿಸ್ತುಕ್ರಮ
- ಕಲ್ಯಾಣ ಮಂಟಪಗಳಿಗೆ ಟಫ್ ರೂಲ್ಸ್
- ಅಪಾರ್ಟ್‌ಮೆಂಟ್‌ಗಳಲ್ಲಿ ಮೋಜು-ಮಸ್ತಿಗೆ ಅವಕಾಶವಿಲ್ಲ

**ಶಾಲಾ- ಕಾಲೇಜು ಬಂದ್ ಮಾಡಲ್ಲ**: ಇನ್ನು ಹದಿನೈದು ದಿನಗಳಲ್ಲಿ ಪರೀಕ್ಷೆಗಳು ಬರುತ್ತವೆ. ಯಾವುದೇ ಕಾರಣಕ್ಕೂ ಶಾಲೆ-ಕಾಲೇಜುಗಳನ್ನು ಬಂದ್ ಮಾಡುವುದಿಲ್ಲ. ಪರೀಕ್ಷೆ ಇಲ್ಲದೇ ಯಾವುದೇ ವಿದ್ಯಾರ್ಥಿಗಳನ್ನು ಪಾಸ್ ಮಾಡುವುದಿಲ್ಲ.

**ಚಿತ್ರಮಂದಿರಗಳಿಗೂ ನಿರ್ಬಂಧ ಇಲ್ಲ**: ಚಿತ್ರಮಂದಿರಗಳಲ್ಲಿ ಮತ್ತೆ ಶೇ.50ರಷ್ಟು ಸೀಟ್ ಭರ್ತಿಗೆ ಆದೇಶಿಸಿ ಎಂದು ತಾಂತ್ರಿಕ ಸಲಹಾ ಸಮಿತಿ ಹೇಳಿದೆ. ಆದರೆ ಈ ಬಗ್ಗೆ ಯಾವುದೇ ನಿರ್ಧಾರ ಸದ್ಯಕ್ಕೆ ಬೇಡ ಎನ್ನಲಾಗಿದೆ. ಆರ್ಥಿಕವಾಗಿ ಹೊಡೆತ ಕೊಡುವ ಯಾವುದೇ ನಿರ್ಧಾರಗಳನ್ನು ತೆಗೆದುಕೊಂಡಿಲ್ಲ.